ಎಲ್.ಪಿ.ಜಿ. ಗ್ರಾಹಕರಿಗೆ ಸೀಮೆ ಎಣ್ಣೆ

513(903); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯದಲ್ಲಿ ಎಲ್‌ಪಿಜಿ ಗ್ರಾಹಕರಿಗೂ ಸೀಮೆಎಣ್ಣೆಯನ್ನು ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಲ್‌ಪಿಜಿ ಗ್ರಾಹಕರಿಗೂ ಸೀಮೆಎಣ್ಣೆಯ ಅವಶ್ಯಕತೆ ಇರುವುದು ನಿಜವಲ್ಲವೇ;

ಇ) ಹಾಗಿದ್ದಲ್ಲಿ, ಈವರೆವಿಗೂ ಸೀಮೆಎಣ್ಣೆಯನ್ನು ವಿತರಿಸದೇ ಇರುವುದಕ್ಕೆ ಕಾರಣಗಳೇನು?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಇಲ್ಲ

ಆ) ಎಲ್.ಪಿ.ಜಿ. ಸಂಪರ್ಕ ಹೊಂದಿರುವ ಗ್ರಾಹಕರಿಗೆ ಅಡುಗೆಗಾಗಿ ಸೀಮೆ ಎಣ್ಣೆ ಅವಶ್ಯಕತೆ ಇರುವುದಿಲ್ಲ

ಇ) ಅನ್ವಯಿಸುವುದಿಲ್ಲ.

ಶಾಸಕರು ನಿಧಿಗೆ ಬಿಡುಗಡೆಯಾಗಿರುವ ಅನುದಾನ

514(904); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯದ ಪ್ರತಿ ವಿಧಾನಸಭಾ ಕ್ಷೇತ್ರದ ಶಾಸಕರ ನಿಧಿಗೆ ಈವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು (ಪ್ರತಿ ವಿಧಾನಸಭಾವಾರು ಮಾಹಿತಿ ನೀಡುವುದು)

ಆ) ಮಾಡಿದ್ದಲ್ಲಿ, ಕ್ಷೇತ್ರ ಅಭಿವೃದ್ಧಿ ಹಿತದೃಷ್ಟಿಯಿಂದ ಸರ್ಕಾರ ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವುದೇ;